ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	:	1232
ಸದಸ್ಯರ ಹೆಸರು	:	ಶ್ರೀ ಕೆ. ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ	:	22-09-2021. (ಕಂದಾಯ ಇಲಾಖೆಯಿಂದ ವರ್ಗಾವಣೆಯಾದ ಪ್ರಶ್ನೆ)
ಉತ್ತರಿಸುವವರು	:	ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕ್ರಸಂ	ಪ್ರಶ್ನೆ	ಉತ್ತರ
1.	ಭೂ-ಪರಿವರ್ತನೆಯಾದ ಜಾಗವನ್ನು ನಮೂನೆ-11 ಬಿ ಮೂಲಕ ಖರೀದಿಸಿದ್ದರೂ ನಮೂನೆ-9 ಹಾಗೂ 11-ಎ ನೀಡುವುದನ್ನು ರಾಜ್ಯದಲ್ಲಿ ಸ್ಥಗಿತಗೊಳಿಸಿದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:	ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಕ್ರಮಬದ್ಧ ಆಸ್ತಿಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9 ಮತ್ತು 11ಎ ಯನ್ನು ಪಡೆಯಲು ಆಸ್ತಿಯ ಮಾಲೀಕರು ಆಸ್ತಿಗೆ ಸಂಬಂಧಿಸಿದ ದಾಖಲೆಗಳನ್ನು ಒದಗಿಸಿದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ನಮೂನೆ-9 ಮತ್ತು 11ಎ ವಿತರಿಸುತ್ತಾರೆ. ಕ್ರಮಬದ್ಧವಲ್ಲದ ಆಸ್ತಿಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ 11ಬಿ ಯನ್ನು ಪಡೆಯಲು ಆಸ್ತಿಯ ಮಾಲೀಕರು ಆಸ್ತಿಗೆ ಸಂಬಂಧಿಸಿದ ದಾಖಲೆಗಳನ್ನು ಒದಗಿಸಿದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ನಮೂನೆ 11ಬಿ ವಿತರಿಸುತ್ತಾರೆ. ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ವಿತರಿಸುವುದಕ್ಕೆ ವಿನಾಯಿತಿ ನೀಡಿ ನಮೂನೆ 11ಬಿ ಯನ್ನು ಕೈಬರಹದ ಮೂಲಕ ನೀಡಲು ಅವಕಾಶ ಕಲ್ಪಿಸಲಾಗಿದೆ. ಭೂ ಪರಿವರ್ತಿತ ಜಮೀನುಗಳಲ್ಲಿ ದಿನಾಂಕ:14-06-2013 ರೊಳಗೆ ಸೃಜನೆಯಾಗಿರುವ ಹಾಗೂ ಗ್ರಾಮ ಪಂಚಾಯತಿಯಿಂದಲೇ ಲೈಸೆನ್ಸ್ ಪಡೆದು ಖಾಯಂಯಾಗಿ ಮನೆ ನಿರ್ಮಿಸಿರುವ ಕಟ್ಟಡಗಳಿಗೆ ಒಂದು ಬಾರಿ ಏಕವಿನ್ಯಾಸ ನಕ್ಷೆ ಅನುಮೋದನೆಯಿಂದ ವಿನಾಯಿತಿ ನೀಡಿ ನಮೂನೆ-9 ಮತ್ತು ನಮೂನೆ-11ಎ ನೀಡಲು ತಿಳಿಸಲಾಗಿದೆ. ಮುಂದುವರೆದು, ಕ್ರಮಬದ್ಧವಲ್ಲದ ಆಸ್ತಿಗಳಿಗೆ ಸಂಬಂಧಿಸಿದಂತೆ ನಮೂನೆ-11ಬಿ ಪಡೆದಿರುವ ಆಸ್ತಿಯ ಮಾಲೀಕರು ನಮೂನೆ-9 ಮತ್ತು 11ಎ ಯನ್ನು ಪಡೆಯಲು ಆಸ್ತಿಗೆ ಸಂಬಂಧಿಸಿದ ಭೂ ಪರಿವರ್ತನೆ ಆದೇಶ ಮತ್ತು ಸಕ್ಷಮ ಪ್ರಾಧಿಕಾರದಿಂದ ಅಂದರೆ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ನಗರಾಭಿವೃದ್ಧಿ ಪ್ರಾಧಿಕಾರ / ಯೋಜನಾ ಪ್ರಾಧಿಕಾರಿಗಳಿಂದ ಅನುಮೋದನೆ ಪಡೆದ ವಿನ್ಯಾಸ ನಕ್ಷೆ (ಲೇಔಟ್ ಪ್ಲಾನ್) ಒದಗಿಸಿದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ನಮೂನೆ-9 ಮತ್ತು 11ಎ ವಿತರಿಸುತ್ತಾರೆ.
2.	ಬಂದಿದ್ದಲ್ಲಿ, ನಿಯಮಾವಳಿಯಂತೆ ಸ್ಟ್ಯಾಂಪ್ ಶುಲ್ಕ ಇತ್ಯಾದಿಗಳನ್ನು ತೆತ್ತು ಭೂ-ಪರಿವರ್ತಿತ ಜಾಗವನ್ನು 11-ಬಿ ಮೂಲಕ ಖರೀದಿಸಿದವರಿಗೆ ನಮೂನೆ-9 ಹಾಗೂ 11-ಎ ನೀಡಲು ಸರ್ಕಾರ ಕೈಗೊಂಡ ಕ್ರಮವೇನು.	
3.	ಇಲ್ಲವಾದಲ್ಲಿ, ನಮೂನೆ-9 ಹಾಗೂ 11-ಎ ನ್ನು ನೀಡಲು ಯಾವಾಗ ಕ್ರಮ ವಹಿಸಲಾಗುವುದು?	

ಸಂ. ಗ್ರಾಅಪ 357 ಗ್ರಾಪಂಅ 2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು